ನಗರಸಭೆಯನ್ನು ಮೇಲ್ದರ್ಜೆಗೇರಿಸುವುದು

1851(1761); ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ರಾಜ್ಯದಲ್ಲಿ ಒಟ್ಟು ನಗರಸಭೆಗಳು ಎಷ್ಟು; ಅವುಗಳ ಪೈಕಿ ಯಾವುದಾದರೂ ನಗರಸಭೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಸರ್ಕಾರವು ಯಾವಾಗ ಈ ಪ್ರಸ್ತಾವನೆಯನ್ನು ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) ರಾಜ್ಯದಲ್ಲಿ 41 ನಗರಸಭೆಗಳಿರುತ್ತವೆ. ಮುಂದುವರೆದು, ಪ್ರಸ್ತುತ 15 ಪುರಸಭೆಗಳನ್ನು ನಗರಸಭೆಗಳನ್ನಾಗಿ ಪರಿವರ್ತಿಸುವ ಪ್ರಕ್ರಿಯೆ ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತದೆ. ನಗರಸಭೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಪುರಸಭೆಯನ್ನು ಮೇಲ್ದರ್ಜೆಗೇರಿಸುವುದು

1852(1762); ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ರಾಜ್ಯದಲ್ಲಿ ಒಟ್ಟು ಪುರಸಭೆಗಳು ಎಷ್ಟು; ಅವುಗಳ ಪೈಕಿ ಯಾವುದಾದರೂ ಪುರಸಭೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಸರ್ಕಾರವು ಯಾವಾಗ ಈ ಪ್ರಸ್ತಾವನೆಯನ್ನು ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 94 ಪುರಸಭೆಗಳಿರುತ್ತವೆ. ಪ್ರಸ್ತುತ ರಾಜ್ಯದ 15 ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಕಾರ್ಯ ಪ್ರಗತಿಯಲ್ಲಿದೆ.

ಆ) ಸಿರಗುಪ್ಪ ಪುರಸಭೆಯನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸಿ ಅಂತಿಮ ಆದೇಶ ಹೊರಡಿಸಲಾಗಿದೆ.

ಹೊಸಕೋಟೆ, ಕನಕಪುರ, ಚಳ್ಳಕೆರೆ, ಹರಿಯೂರು, ಮುಳಬಾಗಿಲು, ಶಿಡ್ಲಘಟ್ಟ, ಪುತ್ತೂರು, ಉಲ್ಲಾಳ, ಅರಸೀಕೆರೆ, ಹುಣಸೂರು, ನಂಜನಗೂಡು, ಮುಧೋಳ, ಶಹಾಪುರ ಮತ್ತು ಸುರಪುರ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಈಗಾಗಲೇ ಸಚಿವರ ಸಂಪುಟದ ಅನುಮೋದನೆ ಪಡೆದು, ಘನತೆವೆತ್ತ ರಾಜ್ಯಪಾಲರ ಅನುಮೋದನೆಯೊಂದಿಗೆ ಸಾರ್ವಜನಿಕರಿಂದ ಆಕ್ಷೇಪಣೆ/ ಸಲಹೆಗಳನ್ನು ಆಹ್ವಾನಿಸಿ ಅಧಿಸೂಚನೆ ಹೊರಡಿಸಲಾಗಿದೆ. ಅಂತಿಮ ಅಧಿಸೂಚನೆ ಹೊರಡಿಸುವ ಕಾರ್ಯ ಪ್ರಗತಿಯಲ್ಲಿದೆ.

ವಿದ್ಯುತ್ ಕೊರತೆಯಿರುವುದು

1853(1987); ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ತುಮಕೂರು ನಗರ ವಿಧಾನ ಸಭಾ ಕ್ಷೇತ್ರದಲ್ಲಿ ವಿದ್ಯುತ್ ವಿತರಣೆಯಲ್ಲಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಕ್ಷೇತ್ರದಲ್ಲಿ ಎಷ್ಟು ವಿದ್ಯುತ್ ವರ್ಷವಾರು ಹಂಚಿಕೆ (ಕೋಟಾ) ನಿಗದಿ ಮಾಡಿದೆ: ಅದರಲ್ಲಿ ಎಷ್ಟು ಹಂಚಿಕೆ ಮಾಡಲಾಗಿದೆ: ಎಷ್ಟು ಕೊರತೆ ಇದೆ;